# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 174 /2022-23 ದಿನಾಂಕ : 24-2-2023

ದಿನಾಂಕ: 20-02-2023 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ:174 (143) ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

<u>ಉಪಸ್ಥಿತರು:</u>

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ಟಿ. ಆಂಜನೇಯ | ಹಿರಿಯ ಆರೋಗ್ಯ ಪರಿವೀಕ್ಷಕರು | 9880052188 |
| 10 | ಶ್ರೀ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |

ದಿನಾಂಕ: 04-02-2023 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಪು.ತಿ.ನೋ

Scanned with OKEN Scanner

ಮೊದಲು ಸಭೆಯಲ್ಲಿ ಹಾಜರಿದ್ದ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್ ಶ್ರೀ. ವೆಂಕಟೇಶ್ ರವರು ಮಾತನಾಡಿ ಈ ಕೆಳಗಿನ ವಿಷಯಗಳನ್ನು ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು.

1. ಎಂ.ಎಂ.ವಿ ರಸ್ತೆಗೆ ಡಾಂಬರೀಕರಣ ಮಾಡುವುದು.
2. ಸಜ್ಜನ್‌ರಾವ್ ವೃತ್ತದ ಬಳಿ ಇರುವ ದೇವಸ್ಥಾನಗಳ ತ್ಯಾಜ್ಯವನ್ನು ತೆರವುಗೊಳಿಸುವುದು.
3. ಫುಡ್‌ಸ್ಟ್ರೀಟ್‌ನ ನವೀಕರಣ ಕಾಮಗಾರಿ ನಡೆಯುತ್ತಿರುವುದರಿಂದ ವ್ಯಾಪಾರಸ್ಥರು ಈಸ್ಟ್ ಸರ್ಕಲ್ ರಸ್ತೆ, ಎಸ್.ಎಸ್.ಟೆಂಪಲ್ ರಸ್ತೆಗಳಲ್ಲಿ ವ್ಯಾಪಾರ ವಹಿವಾಟು ಮಾಡುತ್ತಿರುವುದರಿಂದ ತೊಂದರೆಯಾಗುತ್ತಿರುವ ಬಗ್ಗೆ.
4. ಜೈನ್ ಟೆಂಪಲ್ ರಸ್ತೆಯ ಫ್ಲಾಟ್‌ಗಳಿಂದ ತ್ಯಾಜ್ಯವನ್ನು ವಿಂಗಡಿಸಿ ಪಡೆಯುವುದು.
5. ಎಸ್.ಎಸ್.ಟೆಂಪಲ್ ರಸ್ತೆ ಹಾಗೂ ಜೈನ್ ಟೆಂಪಲ್ ರಸ್ತೆಗಳಲ್ಲಿ ಬೀಡಾಡಿ ಹಸುಗಳನ್ನು ತೆರವುಗೊಳಿಸುವುದು.
6. ರಸ್ತೆಗಳಲ್ಲಿರುವ ಎಲೆ ಕಸವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವುದು.
7. ತಳ್ಳುಗಾಡಿಗಳ ವ್ಯಾಪಾರಸ್ಥರು ಹಾಗೂ ಅಂಗಡಿಗಳ ವ್ಯಾಪಾರಸ್ಥರು ರಾತ್ರಿ 11.00 ಗಂಟೆಯಾದರು ವ್ಯಾಪಾರವನ್ನು ಸ್ಥಗಿತಗೊಳಿಸದಿರುವುದು.
8. ಬಾರಿ ವಾಹನಗಳನ್ನು ಎಲ್ಲೆಂದರಲ್ಲಿ ನಿಲ್ದಾಣ ಮಾಡುವುದು.

ಮಾನ್ಯ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳನ್ನು ಸಭೆಯಲ್ಲಿ ಚರ್ಚಿಸಲಾಗಿ ಸಂಬಂಧಪಟ್ಟ ಆರೋಗ್ಯ ಇಲಾಖೆ, ಪಶುಸಂಗೋಪನಾ ಇಲಾಖೆ ಹಾಗೂ ಪೋಲಿಸ್ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಿ ಸಮನ್ವಯತೆಯಿಂದ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಸಭೆಗೆ ಬಂದಿದ್ದ ಸಾರ್ವಜನಿಕರೊಬ್ಬರು ಮಾತನಾಡಿ ಈಗಾಗಲೇ ವಾರ್ಡ್‌ನಲ್ಲಿ ಕೆಲವು ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿದ್ದು ಅವುಗಳನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸಬೇಕೆಂದು ಕೋರಿದರು. ಈ ವಿಷಯವಾಗಿ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ ಆದಷ್ಟು ಬೇಗ ಕಾಮಗಾರಿಗಳನ್ನು ಮುಗಿಸುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -174 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 174 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned with OKEN Scanner